**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 174

ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ ರುದ್ರಪ್ಪ

ಉತ್ತರಿಸುವ ಸಚಿವರು : ತೋಟಗಾರಿಕೆ ಸಚಿವರು

ಉತ್ತರಿಸುವ ದಿನಾಂಕ : 10.12.2018

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆಯಲ್ಲಿರುವ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಮತ್ತು ಅದರ ಅಧೀನದಲ್ಲಿ ನಡೆಯುತ್ತಿರುವ ಮಹಾವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಬೋಧಕ ಮತ್ತುಬೋಧಕೇತರ ಹುದ್ದೆಗಳೆಷ್ಟು; | ಬಾಗಲಕೋಟೆಯಲ್ಲಿರುವ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಅದರ ಅಧೀನದಲ್ಲಿ ಬರುವ ಮಹಾವಿದ್ಯಾಲಯಗಳು ಸೇರಿದಂತೆ ವಿಶ್ವವಿದ್ಯಾಲಯಕ್ಕೆ 459 ಬೋಧಕ ಹಾಗೂ 960 ಬೋಧಕೇತರ ಸೇರಿದಂತೆ ಒಟ್ಟು 1419 ಹುದ್ದೆಗಳು ಮಂಜೂರಾಗಿರುತ್ತವೆ. |
| ಆ) | ಮಂಜೂರಾದ ಹುದ್ದೆಗಳಲ್ಲಿ ಖಾಯಂ ಮತ್ತು ಗುತ್ತಿಗೆ ಆಧಾರದ ಮೇಲೆ ಹಾಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | ಮಂಜೂರಾದ 1419 ಹುದ್ದೆಗಳಲ್ಲಿ ಒಟ್ಟು 760 ಸಿಬ್ಬಂದಿ ಖಾಯಂ ಆಗಿ ಕೆಲಸ ನಿರ್ವಹಿಸುತ್ತಿರುತ್ತಾರೆ. ಗುತ್ತಿಗೆ ಆಧಾರದ ಮೇಲೆ 359 ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಖಾಲಿ ಇರುವ ಹುದ್ದೆಗಳು 659. |
| ಇ) | ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪೂರ್ಣಗೊಳಿಸಲಾಗುವುದು. | ಪ್ರಸ್ತುತ ಖಾಲಿ ಇರುವ ಹುದ್ದೆಗಳಲ್ಲಿ ವಿಶ್ವವಿದ್ಯಾಲಯದ ನಿಯಮಾವಳಿಗಳನ್ವಯ ನೇರ ನೇಮಕಾತಿಯಡಿ ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಈ ಕುರಿತಂತೆ ಕಾಲಮಿತಿ ನಿಗದಿಪಡಿಸಿರುವುದಿಲ್ಲ. |

ಸಂಖ್ಯೆ: ತೋಇ 354 ತೋಇವಿ 2018

(ಎಂ.ಸಿ.ಮನಗೂಳಿ)

**ತೋಟಗಾರಿಕೆ ಸಚಿವರು**

ಎಂ.ಸಿ. ಮನಗೂಳಿ

ತೋಟಗಾರಿಕೆ ಸಚಿವರು